# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –302 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:27–06–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 02 Issue - 302 | RNI No: KARKAN/2023/88462 | KA/SK/CTA-874/2024-2026 | Chitradurga | Date: 27-06-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಊಹಾ ಪತ್ರಿಕೋದ್ಯಮಕ್ಕೆ ಜೋತು ಬಿದ್ದರೆ ಅಧ್ಯಯನಶೀಲತೆ ಬೆಳೆಯುವುದಿಲ್ಲ: ಕೆ.ವಿ.ಪಿ 2

4 ಕೋಟಿ ವೆಚ್ಚದ ಸಿ.ಸಿ.ರಸ್ತೆ ಕಾಮಗಾರಿಗೆ ಶಾಸಕ ಚಂದ್ರಪ್ಪ ಭೂಮಿ ಪೂಜೆ 3

ಯುವ ಪೀಳಿಗೆ ಮಾದಕ ದ್ರವ್ಯ ವ್ಯಸನಗಳಿಗೆ ಬಲಿಯಾಗದಿರಿ: ಐಜಿ ಡಾ.ರವಿಕಾಂತೇಗೌಡ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಒಂದೂವರೆ ತಿಂಗಳು ಭದ್ರಾ ಅಚ್ಚುಕಟ್ಟುದಾರರ ಎಡದಂಡೆ ನಾಲೆಗೆ ನೀರಿಲ್ಲ

» ದಾವಣಗೆರೆ

ಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರ ಅನುಮತಿ ಮೇರೆಗೆ ಭದ್ರಾ ಜಲಾಶಯದ ಎಡದಂಡೆ ನಾಲೆಗೆ ಹೊಸ ಗೇಟ್ ಅಳವಡಿಕೆ ಕಾಮಗಾರಿ ಕೈಗೊಳ್ಳಬೇಕಾಗಿದೆ. ಇದರಿಂದ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಎಡದಂಡೆ ನಾಲೆಯ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಹರಿಸಲು ಸಾಧ್ಯವಾಗದು. ಆದ್ದರಿಂದ ನಾಲಾ ವ್ಯಾಪ್ತಿಯ ರೈತರು ನೀರಾವರಿ ಆಶ್ರಿತ ಬೆಳೆಗಳನ್ನು ಬೆಳೆಯಬಾರದೆಂದು ಭದ್ರಾ ಜಲಾಶಯದ ಅಧೀಕ್ಷಕ ಇಂಜಿನಿಯರ್ ಹಾಗೂ ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಗೇಟ್ ಅಳವಡಿಕೆ ಕೆಲಸ ಸುಮಾರು ಒಂದೂವರೆ ತಿಂಗಳ ಕಾಲ ನಡೆಯಲಿದ್ದು ಎಡದಂಡೆ ನಾಲೆಯಿಂದ ಯಾವುದೇ ನೀರಾವರಿ ಬೆಳೆಗಳಿಗೆ ನೀರು ಬಿಡುವುದಿಲ್ಲ. ಆದ್ದರಿಂದ ಈ ನಾಲೆಯ ಅಚ್ಚುಕಟ್ಟು ಪ್ರದೇಶದ ರೈತರು ಭತ್ತ ಸೇರಿದಂತೆ ಯಾವುದೇ ನೀರಾವರಿ ಆಶ್ರಿತ ಬೆಳೆಗಳನ್ನು ಹಾಕಬಾರದೆಂದು ತಿಳಿಸಿದ್ದಾರೆ.

### ಮೂರು ದಿನಗಳ ಅಧ್ಯಯನ ಶಿಬಿರ: ಅರ್ಜಿ

» ಚಿತ್ರದುರ್ಗ

ಕನ್ನಡ ಸಾಹಿತ್ಯ ಅಕಾಡೆಮಿಯು ವಿಶೇಷ ಘಟಕ ಯೋಜನೆಯಡಿ ದಲಿತ ಸಾಹಿತ್ಯ: ಅರ್ಧಶತಮಾನ ಎಂಬ ಹೆಸರಿನಲ್ಲಿ ಮೂರು ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ್ ತಿಂಗಳಿನಲ್ಲಿ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. ಜುಲೈ 20 ಅರ್ಜಿ ಸಲ್ಲಿಸಲು ಕೊನೆಯ ದಿನ. ಆಸಕ್ತಿಯಿರುವ 20 ರಿಂದ 50 ವರ್ಷ ವಯಸ್ಸುಳ್ಳ ಪರಿಶಿಷ್ಟ ಜಾತಿಗೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ https://sahithyaacademy.gov.in ನಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಎನ್.ಕರಿಯಪ್ಪ ತಿಳಿಸಿದ್ದಾರೆ.

### ಆರ್ಯವೈಶ್ಯ ನಿಗಮ: ಸಾಲಸೌಲಭ್ಯಕ್ಕಾಗಿ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್ http//kacdc.karnatka.gov.in ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅ ಜಿ ್ ಸಲ್ಲಿಸಲು ಇರಬೇಕಾದ ಸಾಮಾನ್ಯ ಅರ್ಹತೆಗಳು: ಸಾಮಾನ್ಯ ವರ್ಗದಲ್ಲಿ ಆರ್ಯವೈಶ್ಯ ಸಮುದಾಯಕ್ಕೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–"ಜಿ"ಯಲ್ಲಿ ಪಡೆದಿರಬೇಕು. ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು. ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33 , ವಿಶೇಷ ಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.5 ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸಾಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಅವಕಾಶವಿರುತ್ತದೆ. ಸ್ವ ೦ ೨ ೨ ೦ ಉದ್ಯೋಗ ನೇರಸಾಲ ಯೋಜನೆ, ಬ್ಯಾಂಕ್‌ಗಳ ಸಹಯೋಗದೊಂದಿಗೆ ಆರ್ಯವೈಶ್ಯ ಆಹಾರ ವಾಹಿನಿ ಯೋಜನೆ, ವಾಸವಿ ಜಲಶಕ್ತಿ ಯೋಜನೆ ಹಾಗೂ ಅರಿವು ಶೈಕ್ಷಣಿಕ ಸಾಲ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳ ಮಾರ್ಗಸೂಚಿ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ಅರ್ಹತೆಗಳ ಸಂಕ್ಷಿಪ್ತ ವಿವರಗಳಿಗೆ http//kacdc.karnatka.gov.in ಹಾಗೂ ನಿಗಮದ ಸಹಾಯವಾಣಿ 9448451111 ಸಂಖ್ಯೆಗೆ ಕರೆ ಮಾಡಬಹುದಾಗಿದೆ ಎಂದು ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪ ತಿಳಿಸಿದ್ದಾರೆ.

## ವಿಕಲಚೇತನರಿಗೆ ಸಕಾಲದಲ್ಲಿ ಸೌಲಭ್ಯ ಒದಗಿಸುವ ಮೂಲಕ ಅವರ ಬದುಕಿಗೆ ವಿಶ್ವಾಸ ತುಂಬಲಾಗುತ್ತಿದೆ: ರಘುಮೂರ್ತಿ

» ಚಳ್ಳಕೆರೆ

ಅಂಗವಿಕಲರೂ ಸಹ ಆತ್ಮಾಭಿಮಾನದಿಂದ ಬದುಕುವ ವಾತಾವರಣವನ್ನು ರಾಜ್ಯಸರ್ಕಾರ ನಿರ್ಮಾಣ ಮಾಡಿದೆ. ಪ್ರತಿವರ್ಷವೂ ಆಯ್ದ ಫಲಾನುಭವಿಗಳಿಗೆ ಸೌಲಭ್ಯ ನೀಡುವ ಮೂಲಕ ಅವರಿಗೆ ಆತ್ಮವಿಶ್ವಾಸವನ್ನು ತುಂಬಲಾಗುತ್ತಿದೆ. ಜಿಲ್ಲೆಯ ವಿಕಲಚೇತನ ಹಾಗೂ ಹಿರಿಯ ನಾಗರೀಕರಸಬಲೀಕರಣ ಇಲಾಖೆವ್ಯವಸ್ಥಿತ ಕಾರ್ಯಶೈಲಿಯಮೂಲಕ ಅಂಗವಿಕಲರ ಜೀವನ ಸುಧಾರಣೆಗೆ ಶ್ರಮಿಸಿದೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶಾಸಕ ಭವನ ಆವರಣದಲ್ಲಿ ಕ್ಷೇತ್ರದ ಆಯ್ದ ಫಲಾನುಭವಿಗಳಿಗೆ ಯಂತ್ರಚಾಲಿನ ದ್ವಿಚಕ್ರವಾಹನ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಟಾಕಿಂಗ್‌ಲ್ಯಾಪ್‌ಟಾಪ್ ವಿತರಣೆ, ಬ್ರೈಲ್‌ಕಿಟ್ ವಿತರಣೆ, ಸ್ವಯಂಉದ್ಯೋಗಕ್ಕಾಗಿ ಹೊಲಿಗೆ ಯಂತ್ರವಿತರಣೆ ಹಾಗೂ ಅಂತರ್ಜಾತಿವಿವಾಹದ ಪ್ರೋತ್ಸಾಹದನದ




ಚೆಕ್ ವಿತರಿಸಿ ಮಾತನಾಡಿದರು.

ಪ್ರಸ್ತುತ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಕೆ.ಸಿ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಸಹಕಾರದಿಂದ ಆಯ್ಕೆಗೊಂಡ ಬಹುತೇಕ ಎಲ್ಲಾ ಫಲಾನುಭವಿಗಳಿಗೆ ಸೌಲಭ್ಯ ನೀಡಲುಸಾಧ್ಯವಾಗಿದೆ. ಕಳೆದ ಸುಮಾರು 10ವರ್ಷದಿಂದ ಕ್ಷೇತ್ರದ ಅಂಗವಿಕಲ ಬಂಧುಗಳು ಸರ್ಕಾರದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ಪಡೆಯುತ್ತಿರುವುದು ಸಂತಸ ತಂದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲೆಯ ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಅಧಿಕಾರಿಜೆ.ವೈಶಾಲಿ, ಸರ್ಕಾರದ ನಿಯಮಗಳಾನುಸಾರ ಫಲಾನುಭವಿಗಳ ಆಯ್ಕೆ ನಡೆಯುತ್ತದೆ. ಕೆಲವೊಂದು ಸಂದರ್ಭದಲ್ಲಿ ಮಾತ್ರ ಹೆಚ್ಚುಸೌಲಭ್ಯ ಅವಶ್ಯವಿದ್ದಲ್ಲಿ ಸಂಬಂಧಪಟ್ಟ ಶಾಸಕರೊಂದಿಗೆ ಚರ್ಚಿಸಿ ಸರ್ಕಾರಕ್ಕೆ ಮಾಹಿತಿ ನೀಡಿ ಫಲಾನುಭವಿಗಳಿಗೆ ಅವಶ್ಯವಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಜಿಲ್ಲೆಯ ವಿಕಲಾಂಗಚೇತನರಿಗೆ ಯಾವುದೇ ತೊಂದರೆಯಾಗದಂತೆ ಸೌಲಭ್ಯಗಳನ್ನು ನೇರವಾಗಿ ಅವರಿಗೆ ತಲುಪಿಸಲಾಗುತ್ತದೆ, ಇಲಾಖೆಯ ಎಲ್ಲಾ ಹಂತದ ಸಿಬ್ಬಂದಿ ಹಾಗೂ ಅಧಿಕಾರಿಗಳು ದಕ್ಷತೆಯಿಂದ ಕಾರ್ಯನಿರ್ವಹಿಸಿದ್ದು ಹೆಚ್ಚಿನ ಪ್ರಮಾಣದಲ್ಲಿ ಸೌಲಭ್ಯಗಳನ್ನು ವಿತರಣೆ ಮಾಡಲು ಸಾಧ್ಯವಾಗಿದೆ ಎಂದರು.

ಇಒ ಶಶಿಧರ, ಜಿ.ನರಸಿಂಹಮೂರ್ತಿ, ಗ್ಯಾರಂಟಿಸಮಿತಿಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಗರಸಭೆ ಪ್ರಭಾರ ಅಧ್ಯಕ್ಷೆ ಸಿ.ಕವಿತಾಬೋರಯ್ಯ, ಸದಸ್ಯರಾದ ಸುಜಾತ, ಸುಮಾ ಮುಂತಾದವರು ಉಪಸ್ಥಿತರಿದ್ದರು.

## ಚಿತ್ರದುರ್ಗ ಜಿಲ್ಲೆಗೆ ಹೆಚ್ಚುವರಿ ಏಕಲವ್ಯ ವಸತಿ ಶಾಲೆ ಮಂಜೂರಾತಿಗೆ: ಸಂಸದ ಕಾರಜೋಳ ಮನವಿ

» ಚಿತ್ರದುರ್ಗ

ಸುಮಾರು 4 ಲಕ್ಷಕ್ಕೂ ಹೆಚ್ಚು ಪರಿಶಿಷ್ಟ ಪಂಗಡಗಳ ಜನರು ವಾಸಿಸುತ್ತಿರುವ ಚಿತ್ರದುರ್ಗ ಜಿಲ್ಲೆಗೆ ಹಾಲಿ ಇರುವ ಏಕಲವ್ಯ ವಸತಿ ಶಾಲೆಯ ಜೊತೆಗೆ ಇನ್ನೊಂದು ಹೆಚ್ಚುವರಿ ಏಕಲವ್ಯ ವಸತಿ ಶಾಲೆಯನ್ನು ಮಂಜೂರು ಮಾಡಲು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವರಿಗೆ ಶಿಫಾರಸ್ಸು ಮಾಡುವಂತೆ ಸಂಸದ ಗೋವಿಂದ ಎಂ.ಕಾರಜೋಳ ರವರು ನಿನ್ನೆ ನವದೆಹಲಿಯಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ರಾಷ್ಟ್ರೀಯ ಬಿ.ಜೆ.ಪಿ.ಅಧ್ಯಕ್ಷರಾದ ಜೆ.ಪಿ.ನಡ್ಡಾರವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಸಾಕಷ್ಟು ಪರಿಶಿಷ್ಟ ಪಂಗಡಕ್ಕೆ ಸೇರಿದವರ ಜನಸಂಖ್ಯೆಯಿದೆ, ಅದರಲ್ಲೂ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ಅತಿ ಹೆಚ್ಚು ಪರಿಶಿಷ್ಟ ವರ್ಗದ ಜನರು ವಾಸಿಸುತ್ತಿದ್ದಾರೆ.

ಜಿಲ್ಲೆಯಲ್ಲಿಹಾಲಿ ಇರುವ ಏಕಲವ್ಯ ವಸತಿ ಶಾಲೆ ಬೇಡಿಕೆಯನ್ನೂ ಪೂರೈಸಲಾಗುತ್ತಿಲ್ಲ, ಪರಿಶಿಷ್ಟ ವರ್ಗಗಳ ಮಕ್ಕಳೂ ಕೂಡ



ಗುಣಮಟ್ಟದ ಶಿಕ್ಷಣ ಪಡೆದು ಮುಖ್ಯವಾಹಿನಿಗೆ ಬರಬೇಕು ಎನ್ನುವ ಆಶಯ ನನ್ನದಾಗಿದೆ ಎಂಬದನ್ನು ಸಚಿವರಿಗೆ ಸಂಸದರು ಮನದಟ್ಟು ಮಾಡಿದ್ದಾರೆ.

ಏಕಲವ್ಯ ವಸತಿ ಶಾಲೆಗೆ ಅಗತ್ಯವಾಗಿರುವ 15 ಎಕರೆ ಜಮೀನನ್ನೂ ಸಹ ಗುರುತಿಸಲು ಈಗಾಗಲೇ ಕ್ರಮಕೈಗೊಂಡಿರುವುದಾಗಿ ಪತ್ರದಲ್ಲಿ ಸಂಸದರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಸದರ ಜೊತೆ ವಿಧಾನಪರಿಷತ್ ಸದಸ್ಯರಾದ ನವೀನ್, ಎನ್.ರವಿಕುಮಾರ್ ಹಾಜರಿದ್ದರು.

## ದೇವನಹಳ್ಳಿಯಲ್ಲಿ ರೈತರ ಮೇಲೆ ಪೋಲೀಸ್ ದೌರ್ಜನ್ಯ: ಪ್ರತಿಭಟನೆ



» ಚಿತ್ರದುರ್ಗ

ದೇವನಹಳ್ಳಿಯಲ್ಲಿ ಶಾಂತಿಯುತವಾಗಿ ಪ್ರತಿಭಟನೆ ಮಾಡುತ್ತಿದ್ದ ಹೊರಾಟಗಾರರ ಮೇಲೆ ನಡೆದ ಪೋಲಿಸ್ ದೌರ್ಜನ್ಯ ಖಂಡಿಸಿ ಚಿತ್ರದುರ್ಗ ನಗರದಲ್ಲಿ ಜಿಲ್ಲಾಧಿಕಾರಿ ಕಚೇರಿ ಬಳಿ ಸಂಯುಕ್ತ ಹೋರಾಟ ಸಮಿತಿವತಿಯಿಂದ ರೈತರು ಪ್ರತಿಭಟನೆ ನಡೆಸಿದ್ದಾರೆ.ದೇವನಹಳ್ಳಿಯಲ್ಲಿ ಅತ್ಯಂತ ಶಾಂತಿಯುತವಾಗಿ ನಡೆದಿದ್ದ ರೈತರ ಪ್ರತಿಭಟನೆಯನ್ನ ಪೊಲಿಸ್ ಬಲ ಬಳಸಿ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನವನ್ನ ಕಾಂಗ್ರೆಸ್ ಸರ್ಕಾರ ನಡೆಸಿದೆ ವಯಸ್ಸಾದ ಮಹಿಳೆರನ್ನು ಬಿಡದೆ ಎಲ್ಲಾ ಹೋರಾಟಗಾರರನ್ನು ಸಿಕ್ಕಾಪಟ್ಟೆ ಎಳೆದಾಡಿ ಪೋಲಿಸ್ ವಶಕ್ಕೆ ಪಡೆದಿದ್ದಾರೆ ಅಭಿವೃದ್ಧಿ ಹೆಸರಿನಲ್ಲಿ ರಿಯಲ್ ಎಸ್ಟೇಟ್ ದಂದೆಕೋರರಿಗೆ ಲಾಭ ಮಾಡಿಕೊಡಲು ಅಸಂಖ್ಯಾತ ರೈತ ಸಮುದಾಯವನ್ನು ಬೀದಿಪಾಲು ಮಾಡಲು ಹೊರಟಿದೆ ಎಂದು ಆಗ್ರಹಿಸಿದರು. ದೇವನಹಳ್ಳಿ ಚನ್ನರಾಯಪಟ್ಟಣ ಭೂ ಸ್ವಾಧೀನ ಪ್ರಕ್ರಿಯೆ ಕೈಬಿಡಬೇಕು, ಬಂಧಿತ ರೈತರನ್ನು ಬೇಷರತ್ತಾಗಿ ಬಿಡುಗಡೆ ಮಾಡಬೇಕು, ಹೊರಾಟಗಾರರೊಂದಿಗೆ ಹೀನಾಯವಾಗಿ ವರ್ತಿಸಿದ ಪೋಲಿಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡರಾಧ ಧನಂಜಯ, ಮಲ್ಲಿಕಾರ್ಜನ್, ಬಸ್ತಿಹಳ್ಳಿ ಸುರೇಶ್‌ಬಾಬು, ನಾಗರಾಜ್ ಷಫಿವುಲ್ಲಾ, ಪುರುಷೋತ್ತಮ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಸಿದ್ದಪ್ಪ, ಯಾದವರೆಡ್ಡಿ, ಹೊರಕೇರಪ್ಪ ಜಿ.ಕೆ.ನಾಗರಾಜ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ

# ಬೆಂಗಳೂರು ನಗರದ ನಿರ್ಮಾಣದಲ್ಲಿದೆ ರೋಚಕ ಚರಿತ್ರೆ

» ಚಿತ್ರದುರ್ಗ

ಕರ್ನಾಟಕ ಸಾಂಸ್ಕೃತಿಕ ಚರಿತ್ರೆಯಲ್ಲಿ ಬೆಂಗಳೂರು ನಿರ್ಮಾಣ ಮಾಡುವಲ್ಲಿ ಕೆಂಪೇಗೌಡರ ಅಹರ್ನಿಶಿ ದುಡಿಮೆ ಇದೆ. ಬೆಂಗಳೂರು ನಗರ ನಿರ್ಮಾಣದ ರೋಚಕ ಚರಿತ್ರೆ ಮಕ್ಕಳು ತಿಳಿದುಕೊಳ್ಳಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ ಹೇಳಿದರು.

ನಗರದ ರೋಟರಿ ಶಾಲಾ ಭವನದಲ್ಲಿ ಗುರುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಗದ್ವಿಖ್ಯಾತ, ಸಿಲಿಕಾನ್ ಸಿಟಿ ಬೆಂಗಳೂರು ನಗರವು ಪ್ರಸ್ತುತ ಲಕ್ಷಾಂತರ ಜನಸಾಮಾನ್ಯರಿಗೆ ಬದುಕು ಕಟ್ಟಿಕೊಳ್ಳಲು



ಹಾಗೂ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಪ್ರಮುಖ ನಗರವಾಗಿದೆ ಎಂದು ತಿಳಿಸಿದರು.

ಮಕ್ಕಳಲ್ಲಿ ಸಾಂಸ್ಕೃತಿಕ ಪ್ರಜ್ಞೆ ಮೂಡಿಸಬೇಕು. ನಾಡು–ನುಡಿಗೆ ಶ್ರಮಿಸಿದ ಮಹನೀಯರ ಜೀವನ, ಆದರ್ಶ, ಕೊಡುಗೆಗಳನ್ನು ಮಕ್ಕಳಿಗೆ ತಿಳಿಸಿಕೊಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 32 ವಿವಿಧ ಮಹನೀಯರ ಜಯಂತಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಚರಣೆ ಮಾಡಲಾಗುತ್ತಿದ್ದು, ಮಹನೀಯರ ಮಾರ್ಗದರ್ಶನ ಹಾಗೂ ಜೀವನವನ್ನು ಜನರಿಗೆ ತಿಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದ ಅವರು, ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ಸ್ಪರ್ಧಾತ್ಮಕ ಮನೋಭಾವದಿಂದ, ಸೃಜನಾತ್ಮಕವಾಗಿ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆ ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ರಾಜ್ಯದ ರಾಜ್ಯಧಾನಿ ಬೆಂಗಳೂರು ಕಟ್ಟಿ ಬೆಳೆಸಿದ ಕೀರ್ತಿ ನಾಡಪ್ರಭು ಕೆಂಪೇಗೌಡ ಅವರಿಗೆ ಸಲ್ಲುತ್ತದೆ. ಅತ್ಯುನ್ನತ ಮಾದರಿ, ಯೋಜನಾ ಬದ್ಧ ಶೈಲಿಯ ನಗರಕ್ಕೆ ಬೆಂಗಳೂರು ಸಾಕ್ಷಿಯಾಗಿದೆ ಎಂದು ತಿಳಿಸಿದ ಅವರು, ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಮಕ್ಕಳಲ್ಲಿ ಜಾಗೃತಿ ಮೂಡಿಸುವ ಕೆಲಸವಾಗುತ್ತಿದೆ ಎಂದು ಹೇಳಿದರು.


ಪುಟ 2

## ಫಾಸ್ಟ್ ನ್ಯೂಸ್

### 4 ಕೋಟಿ ವೆಚ್ಚದ ಸಿ.ಸಿ.ರಸ್ತೆ ಕಾಮಗಾರಿಗೆ ಶಾಸಕ ಚಂದ್ರಪ್ಪ ಭೂಮಿ ಪೂಜೆ



» **ಹೊಳಲ್ಕೆರೆ**

ಚುನಾವಣೆಯಲ್ಲಿ ಮತ ಹಾಕಿದವರು, ಹಾಕದವರು ಎನ್ನುವ ವ್ಯತ್ಯಾಸವಿಲ್ಲದೆ ಎಲ್ಲರಿಗೂ ಸರ್ಕಾರದ ಸೌಲಭ್ಯಗಳನ್ನು ಮುಟ್ಟಿಸುವಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು. ಸಿರಿಗೆರೆ ಹೋಬಳಿಯ ದೊಡ್ಡಿಗನಾಳು ಹೊಸಟ್ಟಿಯಲ್ಲಿ ನಾಲ್ಕು ಕೋಟಿ ರೂ. ವೆಚ್ಚದಲ್ಲಿ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಗುರುವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು. ಕಷ್ಟಪಟ್ಟು ಕೆಲಸ ಮಾಡಿದರೆ ಚುನಾವಣೆಯಲ್ಲಿ ಓಟು ಹಾಕಿಸಿಕೊಳ್ಳುವುದು ಕಷ್ಟ. ಅಂತಹದರಲ್ಲಿ ಎಲ್ಲಿಂದಲೋ ಬಂದು ನಿಮ್ಮ ದಿಕ್ಕು ತಪ್ಪಿಸುವವರ ಮಾತು ನಂಬಿ ಮತ ನೀಡಿ ಮೋಸ ಹೋಗಬೇಡಿ. ಐದು ವರ್ಷಗಳ ಕಾಲ ಯಾರು ನಿಮಗೆ ಒಳ್ಳೆಯದು ಮಾಡುತ್ತಾರೆನ್ನುವ ಆಲೋಚನೆಯಿಟ್ಟುಕೊಂಡು ಮತ ನೀಡಿ. ಜಾತಿಗಿಂತ ನೀತಿ, ನೀಯತ್ತು ಮುಖ್ಯ. ಅದಕ್ಕಾಗಿಯೇ ನಾನು ಐದನೇ ಸಾರಿ ಶಾಸಕನಾಗಿದ್ದೇನೆ. ಇನ್ನು ಮೂರು ವರ್ಷಗಳ ಕಾಲ ಅಧಿಕಾರವಿದೆ. ಕ್ಷೇತ್ರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ಗಂಗಾ ಕಲ್ಯಾಣ ಯೋಜನೆಯಡಿ ಬೋರ್‌ವೆಲ್ ಕೊರೆಸುತ್ತೇನೆ. ನಿವೇಶನಗಳನ್ನು ನೀಡಿ ಮನೆಗಳನ್ನು ಕಟ್ಟಿಸಿಕೊಡುತ್ತೇನೆ. ಯಾವುದೇ ಭಿನ್ನಾಭಿಪ್ರಾಯ ಅಸಮಾಧಾನ ಮನಸ್ಸಿನಲ್ಲಿಟ್ಟುಕೊಳ್ಳುವುದಿಲ್ಲ. ಎಲ್ಲಾ ಜಾತಿ ಧರ್ಮದವರನ್ನು ಸಮಾನವಾಗಿ ಕಾಣುತ್ತೇನೆಂದರು.ಹೆಣ್ಣುಮಕ್ಕಳು ಸೌದೆಯಲ್ಲಿಅಡಿಗೆ ಮಾಡಿ ಕಷ್ಟಪಡಬಾರದೆಂದು ಇಪ್ಪತ್ತು ವರ್ಷಗಳ ಹಿಂದೆಯೇ ಗ್ಯಾಸ್ ಸಿಲಿಂಡರ್, ಸ್ಟವ್ ನೀಡಿದ್ದೇನೆ. ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಪ್ರತಿ ಮನೆಗೆ ಶುದ್ದ ಕುಡಿಯುವ ನೀರು ಪೂರೈಸುವುದಕ್ಕಾಗಿ 367 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದೇನೆಂದು ತಿಳಿಸಿದರು.ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕಮಲಾಕ್ಷಿ, ಮಾಜಿ ಅಧ್ಯಕ್ಷ ಮೋಹನ್, ಭರಮಸಾಗರ ಬಿಜೆಪಿ. ಮಂಡಲ ಅಧ್ಯಕ್ಷ ಶೈಲೇಶ್, ವಿಷ್ಣು, ಮೂರ್ತಿ, ನಾಗರಾಜ, ಆನಂದನಾಯ್ಕತಿಪ್ಪೇಸ್ವಾಮಿ, ಪಂಚಾಕ್ಷರಿ, ಹಿರೇಬೆನ್ನೂರು ನಾಗರಾಜ್, ಶಿವಣ್ಣ, ಕರಿಯಪ್ಪ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

### ಜೂ.28ರಂದು ಕೃಷಿಯಲ್ಲಿ ನ್ಯಾನೋ ಯುರಿಯಾ, ಡಿಎಪಿ ಹಾಗೂ ಡ್ರೋಣ್ ಬಳಕೆ ಕುರಿತು ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಜೂನ್ 28ರಂದು ಬೆಳಿಗ್ಗೆ 10ಕ್ಕೆ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಜಿಲ್ಲೆಯ ರೈತರಿಗೆ ಕೃಷಿಯಲ್ಲಿ ನ್ಯಾನೋಯುರಿಯಾ, ನ್ಯಾನೋ ಡಿಎಪಿ ಹಾಗೂ ಡ್ರೋಣ್ ಬಳಕೆ ಕುರಿತು ಒಂದು ದಿನದತರಬೇತಿ ಮತ್ತು ಪ್ರಾತ್ಯಕ್ಷಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಇಫ್ಕೋ ಸಂಸ್ಥೆಯ ಕ್ಷೇತ್ರ ಅಧಿಕಾರಿ ಚಿದಂಬರಮೂರ್ತಿ ಕುಲಕರ್ಣಿ ಅವರು ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ನ್ಯಾನೋಯುರಿಯಾ ನ್ಯಾನೋ ಡಿಎಪಿ ಬಳಕೆಯ ಮಹತ್ವ ಹಾಗೂ ವಿವಿಧ ಕೃಷಿ ಮತ್ತುತೋಟಗಾರಿಕೆ ಬೆಳೆಗಳಲ್ಲಿ ಪೋಷಕಾಂಶ ಮತ್ತು ಪೀಡೆನಾಶಕ ಸಿಂಪರಣೆಗೆ ಡ್ರೋಣ್ ಬಳಸುವ ಕುರಿತು ವಿಷಯ ಮಂಡನೆ ಮಾಡಲಿದ್ದಾರೆ. ನಂತರ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಪೋಷಕಾಂಶ ಮತ್ತು ಪೀಡೆನಾಶಕ ಸಿಂಪರಣೆಗೆ ಡ್ರೋಣ್ ಬಳಕೆಯ ಪ್ರಾತ್ಯಕ್ಷಿಕೆಯನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತ 50 ಜನರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು 8277931058 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಹಾಗೂ ಮುಖ್ಯಸ್ಥ ಆರ್.ರಜನೀಕಾಂತ ತಿಳಿಸಿದ್ದಾರೆ. ಮೊದಲು ನೋಂದಾವಣಿ ಮಾಡಿಕೊಂಡ 50 ರೈತಭಾಂದವರು ಫ್ರೂಟ್ಸ್ ಐಡಿ (ಎಫ್.ಐಡಿ) ಅಥವಾ ಚುನಾವಣೆ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡ್‌ನೊಂದಿಗೆ ತರಬೇತಿಗೆ ಹಾಜರಾಗಬೇಕು ಎಂದು ಕೋರಿದ್ದಾರೆ.

### ಮಾಸಿಕ ಗಮಕ 29 ರಂದು

» **ಚಿತ್ರದುರ್ಗ**

ಗಮಕ ಕಲಾಭಿಮಾನಿಗಳ ಸಂಘದ 40ನೇ ವಾರ್ಷಿಕೋತ್ಸವದ ಅಂಗವಾಗಿ ಜೂ.29 ರಂದು 23ನೇ ಮಾಸಿಕ ಗಮಕ ಕಾರ್ಯಕ್ರಮ ಆಯೋಜಿಸಲಾಗಿದೆ. ನಗರದ ಜೆಸಿಆರ್ ಗಣಪತಿ ದೇವಸ್ಥಾನದ ಆವರಣದಲ್ಲಿ ಸಂಜೆ 6 ಗಂಟೆಗೆ ಕವಿ ಎಚ್.ಎಸ್.ವೆಂಕಟೇಶಮೂರ್ತಿ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಹಾಗೂ ಸ್ವರಾತ್ಮಿಕಾ ಸಂಗೀತ ಶಾಲೆ ವಿದ್ಯಾರ್ಥಿಗಳು ಗಮಕ ಕಲೆಯ ಮೆರಗಿನೊಂದಿಗೆ ಭಕ್ತಿ ಸಂಗೀತ ಪ್ರಸ್ತುತಪಡಿಸಲಿದ್ದಾರೆ. ಕವಿ ನಿರ್ಮಲಾ ಮರಡಿಹಳ್ಳಿ ಭಾಗವಹಿಸುವರು ಎಂದು ದೇವಾಲಯ ಸೇವಾ ಸಮಿತಿ ತಿಳಿಸಿದೆ.

# ಪ್ಲಾಸ್ಟಿಕ್ ಬಳಕೆ ಬೇಡವೇ ಬೇಡ: ರಮೇಶ್ ಕರೆ

» **ಚಿತ್ರದುರ್ಗ**





ಪ್ಲಾಸ್ಟಿಕ್ ಪರಿಸರಕ್ಕೆ ಹಾನಿಕರ, ಇಂತಹ ಪ್ಲಾಸ್ಟಿಕ್ ಬಳಕೆ ಬೇಡವೇ ಬೇಡ, ಪ್ರತಿಯೊಬ್ಬರು ಪ್ಲಾಸ್ಟಿಕ್ ಬಳಕೆಯನ್ನು ತಿರಸ್ಕರಿಸಬೇಕು ಎಂದು ದಾವಣಗೆರೆ ಜಿಲ್ಲಾ ಪರಿಸರ ಅಧಿಕಾರಿ ರಮೇಶ್ ನಾಯ್ಕ್ ಕರೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಬಳಿಯ ಕ್ರೀಡಾಭವನದಸಭಾಂಗಣದಲ್ಲಿ,ಗುರುವಾರ ವಿಶ್ವ ಪರಿಸರ ದಿನಾಚರಣೆ ಘೋಷವಾಕ್ಯ 'ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು' ಕುರಿತು, ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದ್ದ ಚಿತ್ರಕಲೆ ಸ್ಪರ್ಧೆಯ ಬಹುಮಾನ ವಿತರಣಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭೂಮಿಯ ಮೇಲೆ ಸಕಲ ಜೀವರಾಶಿಗಳಿಗೆ ಗಾಳಿ, ಬೆಳಕು, ನೀರು ಸಮಾನವಾಗಿ ದೊರಕಬೇಕು. ಮನುಷ್ಯನ ಸ್ವಾರ್ಥ ಹಾಗೂ ಅತಿ ಆಸೆಯಿಂದ ಪರಿಸರ ಇಂದು ಹಾನಿಯಾಗಿದೆ. ಶುದ್ದವಾದ ಗಾಳಿ,ಬೆಳಕು, ನೀರು ಮಲಿನಗೊಂಡಿವೆ. ಇದಕ್ಕೆ ಮುಖ್ಯ ಕಾರಣ ಪೆಟ್ರೋಲಿಯಂ ಉತ್ಪನ್ನಗಳ ದಹನ ಹಾಗೂ ಸಿಂಥಟಿಕ್ ಪ್ಲಾಸ್ಟಿಕ್ ಬಳಕೆ ಆಗಿದೆ. ಪೆಟ್ರೋಲಿಯಂ ಉತ್ಪನ್ನಗಳ ಮಿತವಾದ ಬಳಕೆ ಹಾಗೂ ಪ್ಲಾಸ್ಟಿಕ್ ಉತ್ಪನ್ನಗಳನ್ನು ಸಂಪೂರ್ಣವಾಗಿ ತಿರಸ್ಕರಿಸಿ ಪರಿಸರ ರಕ್ಷಣೆಗೆ ಎಲ್ಲರೂ ಒತ್ತು ನೀಡುವಂತೆ ರಮೇಶ್ ನಾಯ್ಕ್ ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮಂಜುನಾಥ, ವಿದ್ಯಾರ್ಥಿಗಳಿಗೆ ಶಾಲೆಯಲ್ಲಿ ಪರಿಸರ ರಕ್ಷಣೆ ಹಾಗೂ ಸ್ವಚ್ಚತೆಯ ಪರಿಕಲ್ಪನೆಯನ್ನು ಮೂಡಿಸಲಾಗುತ್ತಿದೆ. ಗಿಡ ಮರಗಳು ಪರಿಸರ ಸಮತೋಲ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಮಕ್ಕಳು ತಪ್ಪದೇ ಗಿಡ ಮರಗಳಿಗೆ ನೀರುಣಿಸುವ ಕೆಲಸ ಮಾಡಬೇಕು ಎಂದರು.

ನಗರ ಸಭೆ ಪರಿಸರ ಅಧಿಕಾರಿ ಜಾಫರ್ ಮಾತನಾಡಿ, ಪ್ಲಾಸ್ಟಿಕ್ ದಹನದಿಂದ ಕಾರ್ಸೋಜನಿಕ್ ಅನಿಲ ಪರಿಸರ ಸೇರುತ್ತದೆ. ಇದು ಅಪಾಯಾರಿಯಾದ ಅನಿಲವಾಗಿದ್ದು, ಮನುಷ್ಯರಲ್ಲಿ ಹಲವಾರು ಕಾಯಿಲೆಗಳಿಗೆ ಕಾರಣವಾಗುತ್ತದೆ. ಪ್ರತಿಯೊಬ್ಬರು ಮನೆಯಲ್ಲಿ ಹಸಿ ಹಾಗೂ ಒಣ ಕಸಗಳನ್ನು ಬೇರ್ಪಡಿಸಿ ಪೌರ ಕಾರ್ಮಿಕರಿಗೆ ನೀಡಬೇಕು ಎಂದರು.

ಕ್ಷೇತ್ರ ಸಂಪನ್ಮೂಲಾಧಿಕಾರಿ ಸಂಪತ್‌ಕುಮಾರ್ ಮಾತನಾಡಿ, ಪ್ರತಿಯೊಬ್ಬರು ಪ್ಲಾಸ್ಟಿಕ್ ಬಳಕೆಗೆ ಮಿತಿ ಏರಿಕೊಳ್ಳಬೇಕು. ಮನೆಯಿಂದ ತಂದ ಕ್ಯಾರಿಯರ್‌ಗಳಿಂದ ಹೋಟೆಲ್ ಅಥವಾ ಪಾನಿ ಪುರಿ ಅಂಗಡಿಗಳಿಂದ ಪಾರ್ಸಲ್ ತೆಗೆದುಕೊಂಡು ಹೋಗುವುದನ್ನು ಅಭ್ಯಾಸ ಮಾಡಿಕೊಂಡರೆ, ಅನಗತ್ಯವಾಗಿ ಪ್ಲಾಸ್ಟಿಕ್ ಪರಿಸರ ಸೇರುವುದನ್ನು ತಡೆಯಬಹುದು ಎಂದರು. ಜಿಲ್ಲಾ ಪರಿಸರಾಧಿಕಾರಿ ಆಸಿಫ್ ಖಾನ್ ಮಾತನಾಡಿ, ಪ್ಲಾಸ್ಟಿಕ್ ಉತ್ಪನ್ನಗಳನ್ನುಕಡಿಮೆ ಬಳಸುವುದು,ಮರು ಬಳಸುವುದು, ಪುರ್ನ ಬಳಸುವುದರಿಂದ ಪರಿಸರ ಮಾಲಿನ್ಯವನ್ನು ತಡೆಗಟ್ಟಬಹುದು ಎಂದರು.

**ಚಿತ್ರಕಲೆ ಸ್ಪರ್ಧೆ 278 ವಿದ್ಯಾರ್ಥಿಗಳು ಭಾಗಿ:** ಈ ಬಾರಿಯ ಪರಿಸರ ದಿನಾಚರಣೆಯ ಘೋಷವಾಕ್ಯ 'ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು' ಕುರಿತು ಸ್ಥಳದಲ್ಲೇ ಚಿತ್ರ ಬಿಡುಸುವ ಸ್ಪರ್ಧೆಯನ್ನು ಪರಿಸರ ಇಲಾಖೆ ಹಾಗೂ ಕಲಾ ಚೈತನ್ಯ ಸಂಸ್ಥೆ ವತಿಯಿಂದ ಆಯೋಜಿಸಲಾಯಿತ್ತು. ನಗರ 33 ವಿವಿಧ ಶಾಲೆಗಳಿಂದ ಆಗಮಿಸಿದ 278ಕ್ಕೂ ಅಧಿಕ ವಿದ್ಯಾರ್ಥಿಗಳು ಚಿತ್ರಕಲೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. 8,9 ಹಾಗೂ 10 ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಬಹುಮಾನಗಳನ್ನು ವಿತರಿಸಲಾಯಿತು.

8ನೇ ತರಗತಿ ವಿಭಾಗದಲ್ಲಿ ಬಾಪೂಜಿ ಪ್ರೌಢಶಾಲೆ ವಿದ್ಯಾರ್ಥಿ ಶುಭಶ್ರೀ.ಎಲ್ ಸಮಾಧಾನಕರ, ಜ್ಞಾನ ಭಾರತಿ ಶಾಲೆ ಪೂರ್ವಿ.ಕೆ ತೃತೀಯ, ಪಾರ್ಶ್ವನಾಥ ಶಾಲೆ ವಿನೋದ್.ಎಂ. ದ್ವಿತಿಯ, ಸೆಂಟ್ ಜೋಸೆಫ್ ಶಾಲೆಯ ಪ್ರತಿಭಾ.ಪಿ ಪ್ರಥಮ ಬಹುಮಾನ ಗಳಿಸಿದರು.

9ನೇ ತರಗತಿ ವಿಭಾಗದಲ್ಲಿ ಕೋಟೆ ಪ್ರೌಢಶಾಲೆಯ ಜೀವನ್.ಪಿ ಸಮಾಧಾಕರ, ವಿದ್ಯಾವಿಕಾಸ ಶಾಲೆ ಸಿಂಧೂರ.ಕೆ.ವಿ ತೃತೀಯ, ಎಸ್.ಜೆ.ಎಂ. ಶಾಲೆಯ ಅನ್ವಿತಾ ಕೆ.ವಿ. ದ್ವಿತಿಯ, ಕೆ.ಕೆ.ನ್ಯಾಷಿನಲ್ ಶಾಲೆ ತೇಜಸ್ವಿನಿ.ಟಿ ಪ್ರಥಮ ಬಹುಮಾನ ಪಡೆದರು.

10ನೇ ತರಗತಿ ವಿಭಾಗದಲ್ಲಿ ಸರ್ಕಾರಿ ಪ್ರೌಢಶಾಲೆಯ ನಂದಿನಿ. ಎಸ್ ಸಮಾಧಾನಕರ, ಎಸ್.ಆರ್.ಎಸ್ ಶಾಲೆಯ ಕಿಶೋರ್.ವಿ.ಎಸ್ ತೃತೀಯ, ರಿಜನಲ್ ಇಂಗ್ಲೀಷ್ ಶಾಲೆ ಹುರಿಯಾ ಅರ್ಫನ್ ದ್ವಿತಿಯ ಬಹುಮಾನ, ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ಪ್ರಿಯಾಂಕ.ಎಂ ಪ್ರಥಮ ಬಹುಮಾನಕ್ಕೆ ಭಾಜನಾರಾದರು. ಸಭೆಯಲ್ಲಿ ಪರಿಸರ ಸ್ನೇಹಿ ಬಟ್ಟೆ ಬ್ಯಾಗುಗಳನ್ನು ಬಿಡುಗಡೆ ಗೊಳಿಸಲಾಯಿತು.

ಉಪ ಪರಿಸರಾಧಿಕಾರಿ ರಾಜೇಶ್, ಕಲಾ ಚೈತನ್ಯ ಸಂಸ್ಥೆಯ ನಾಗರಾಜ ಬೇಂದ್ರೆ ಸೇರಿದಂತೆ ವಿವಿಧ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ: ಟಿಹೆಚ್‌ಒ

» **ಚಿತ್ರದುರ್ಗ**



ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ. ಬಾಲ್ಯ ವಿವಾಹ ಮಾಡಬೇಡಿ, ಶಿಕ್ಷೆಗೆ ಗುರಿಯಾಗಬೇಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಬಾಲ್ಯ ವಿವಾಹ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಅವರು ಜಿಲ್ಲಾ ಸಮನ್ವಯ ಸಮಿತಿ ಸಭೆಯಲ್ಲಿ ನೀಡಿದ ನಿರ್ದೇಶನದಂತೆ ಬಾಲ್ಯ ವಿವಾಹ ಮತ್ತು ಬಾಲ ಗರ್ಭಿಣಿಯರ ಪ್ರಕರಣ ಆಗದಂತೆ ಸಮುದಾಯದಲ್ಲಿ ಜಾಗೃತಿ ಮೂಡಿಸಲಾಗುತ್ತಿದ್ದು,ದೈಹಿಕಬೆಳವಣಿಗೆಯಾಗದೆ ತಾಯಿ ಗರ್ಭಿಣಿಯಾದರೆ ದಿನ ತುಂಬದ ಹೆರಿಗೆ, ಹೆರಿಗೆ ಸಮಯದಲ್ಲಿ ತಾಯಿ ಮತ್ತು ಮಗುವಿಗೆ ಅಪಾಯ ಸಂಭವಿಸಲಿದೆ ಎಂದು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯಕ್ ಮಾತನಾಡಿ, ಮದುವೆಯ ವಯಸ್ಸು ಹೆಣ್ಣಿಗೆ 18 ವರ್ಷ, ಗಂಡಿಗೆ 21 ವರ್ಷ ಇದೆ. "ಶಿಕ್ಷಣ ಮೊದಲು ನಂತರ ಮದುವೆ" ಎಂದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ಮಾತನಾಡಿ, ಕದ್ದು ಮುಚ್ಚಿ ಮದುವೆ ಮಾಡುವುದು ಕಂಡುಬಂದಲ್ಲಿ 1098ಕ್ಕೆ ಕರೆ ಮಾಡಿರಿ, ಕರೆ ಮಾಡಿದವರ ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು. ಯಾರೂ ಕೂಡ ಭಯಪಡುವ ಅಗತ್ಯ ಇಲ್ಲ ಎಂದು ಹೇಳಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬಾಲ ಗರ್ಭಿಣಿಯರಾದರೆ ರಕ್ತ ಹೀನತೆಯಿಂದ ಹೆರಿಗೆಯ ಸಮಯದಲ್ಲಿ ಪಡಬಾರದ ಯಾತನೆಪಡುವುದು ಸಾಮಾನ್ಯ ಹಾಗೂ ಸಾವಿನದವಡೆಗೆ ಸಿಲುಕಬಹುದು. ಬಾಲ್ಯ ವಿವಾಹವನ್ನು ಪ್ರೋತ್ಸಾಹಿಸಿದವರ ವಿರುದ್ಧ ಸರ್ಕಾರ ಕಾನೂನು ಕ್ರಮ ಜರುಗಿಸಲಾಗುತ್ತದೆ. ಕಾನೂನು ಒಂದೆಡೆಯಾದರೆ ನಮ್ಮ ಹದಿಹರೆಯದ ಬಾಲಕಿಯನ್ನು ಸಾವಿನ ದವಡೆಗೆ ದೂಡದಂತೆ ನಾವುಗಳು ನಿಗಾವಹಿಸಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ.ಶಿಲ್ಪ , ಜಿಲ್ಲಾ ಪೌಷ್ಠಿಕ ಮೇಲ್ವಿಚಾರಕಿ ಸಣ್ಣ ರಂಗಮ್ಮ, ಫಾರ್ಮಸಿ ಅಧಿಕಾರಿ ಮೋಹನ್ ಕುಮಾರ್, ಪ್ರಥಮ ದರ್ಜೆ ಸಹಾಯಕಿ ಮಂಜುಳಾ, ಶುಶ್ರೂಷಕಿನಾಗವೇಣಿ,ಆಪ್ತಸಮಾಲೋಚಕರಾದ ಕಾವ್ಯ, ಕ್ಷ–ಕಿರಣ ತಂತ್ರಜ್ಞ ಪ್ರದೀಪ್ ಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿ ಸುನಿಲ್ ಕುಮಾರ್, ನೇತ್ರಾಧಿಕಾರಿ ಬರ್ಕತ್ ಅಲಿ, ನಿರಂಜನ್, ಮಧುಸೂದನ್, ಇತರ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಇದ್ದರು.



**ಗೋನೂರು ಸಮೀಪವಿರುವ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿರವರ ಹುಟ್ಟುಹಬ್ಬ ಆಚರಣೆ.**

### ಮನೆ ಕಸ ಬೀದಿಗೆ ಹಾಕುವ ಜನರಿಗೆ ದಂಡ ವಿಧಿಸುವಂತೆ ಕರುನಾಡ ವಿಜಯಸೇನೆಯಿಂದ ಪ್ರತಿಭಟನೆ




» **ಚಿತ್ರದುರ್ಗ**

ಸಾರ್ವಜನಿಕರು ತಮ್ಮ ಮನೆಯ ಕಸವನ್ನು ಬೀದಿಗೆ ತಂದು ಸುರಿದು ಪರಿಸರ ಹಾಳು ಮಾಡುತ್ತಿರುವುದನ್ನು ಖಂಡಿಸಿ ಕರುನಾಡ ವಿಜಯಸೇನೆಯಿಂದ ಚಂದ್ರವಳ್ಳಿ ಕ್ರಾಸ್ ಬಳಿ ಗುರುವಾರ ಬೆಳಿಗ್ಗೆ ಸ್ವತಃ ಕಸವನ್ನು ತುಂಬಿ ನಗರಸಭೆ ಲಾರಿಯಲ್ಲಿ ಹಾಕುವ ಮೂಲಕ ಪ್ರತಿಭಟನೆ ನಡೆಸಿ ಪರಿಸರವನ್ನು ಕಲುಷಿತಗೊಳಿಸದಂತೆ ಜನತೆಯಲ್ಲಿ ಮನವಿ ಮಾಡಲಾಯಿತು.ದಿನನಿತ್ಯವೂ ಇದೇ ಮಾರ್ಗವಾಗಿ ವಾಯುವಿಹಾರಕ್ಕೆ ತೆರಳುವವರಿಗೆ ಸುತ್ತಲಿನ ಗಲೀಜು ಪರಿಸರ ಅಸಹ್ಯವೆನಿಸುತ್ತದೆ. ನಗರಸಭೆ ವಾಹನಗಳು ಪ್ರತಿ ನಿತ್ಯವೂ ಜನಸಾಮಾನ್ಯರ ಮನೆ ಬಾಗಿಲಿಗೆ ಹೋದರು ಸಹ ಕೆಲವರು ಹಸಿಕಸ ಹಾಗೂ ಒಣಕಸವನ್ನು ತಂದು ರಸ್ತೆಗೆ ಸುರಿಯುತ್ತಿದ್ದಾರೆ. ಇಂತಹವರಿಗೆ ದಂಡ ವಿಧಿಸಬೇಕು. ಇಲ್ಲವೇ ದೂರು ಸಲ್ಲಿಸುವ ಕೆಲಸವಾಗಬೇಕು ಎಂದು ಪ್ರತಿಭಟನಾಕಾರರು ನಗರಸಭೆ, ಜಿಲ್ಲಾಡಳಿತವನ್ನು ಒತ್ತಾಯಿಸಿದರು.ಐತಿಹಾಸಿಕ ಚಿತ್ರದುರ್ಗ ಕೋಟೆ ಪ್ರವಾಸಿ ತಾಣಕ್ಕೆ ಹೆಸರುವಾಸಿಯಾಗಿರುವಂತೆ ಚಂದ್ರವಳ್ಳಿ, ಆಡುಮಲ್ಲೇಶ್ವರ, ಜೋಗಿಮಟ್ಟಿ ಗಿರಿಧಾಮ ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿದೆ. ಇಂತಹ ಊರನ್ನು ಸ್ವಚ್ಚವಾಗಿಡುವುದು ಸಾರ್ವಜನಿಕರ ಜವಾಬ್ದಾರಿ. ಜೊತೆಗೆ ಜಿಲ್ಲಾಡಳಿತ, ನಗರಸಭೆ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಕಟ್ಟೆಚ್ಚರ ವಹಿಸಿ ಊರಿನ ಸೌಂದರ್ಯ ಹಾಳು ಮಾಡುವವರ ವಿರುದ್ದ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಲ್ಲದೆ ಚಂದ್ರವಳ್ಳಿ ಕ್ರಾಸ್‌ನಲ್ಲಿ ಸಿ.ಸಿ.ಕ್ಯಾಮರಾ ಅಳವಡಿಸುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿ ನಗರಸಭೆ ಹೆಲ್ತ್ ಇನ್ಸ್‌ಪೆಕ್ಟರ್ ನಿರ್ಮಲರವರಿಗೆ ಮನವಿ ಸಲ್ಲಿಸಿದರು. ಕರುನಾಡ ವಿಜಯಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಉಪಾಧ್ಯಕ್ಷ ಮುಜಾಹಿದ್, ಶಶಿಧರ, ನಾಗೇಶ್, ವಿಜಯಬಾಬು, ನಿಸಾರ್‌ಅಹಮದ್, ಹರೀಶ್ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ಡ್ರಗ್ಸ್ ಕತ್ತಲೆ ಪ್ರಪಂಚ, ಈಗಿನ ಯುವ ಸಮೂಹ ಅರಿತು ದೂರವಿರಿ

» **ದಾವಣಗೆರೆ**



ಡಗ್ಸ್ ಕತ್ತಲ ಪ್ರಪಂಚ, ಈ ಜಾಲದ ಬಗ್ಗೆ ಅರಿತು ಯುವ ಸಮೂಹ ದೂರವಿರಬೇಕೆಂದು ಪೂರ್ವ ವಲಯ ಪೊಲೀಸ್‌ಮಹಾನಿರೀಕ್ಷಕರಾದಡಾ.ಬಿ.ಆರ್ ರವಿಕಾಂತೇಗೌಡ ವಿದ್ಯಾರ್ಥಿಗಳಿಗೆ ತಿಳಿಸಿದರು.

ನಗರದ ಪಿ.ಬಿ.ರಸ್ತೆಯಲ್ಲಿರುವ ರೇಣುಕಾ ಮಂದಿರದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಮಾದಕ ವಸ್ತು ವಿರೋಧಿ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಡದೇಶ ಹಾಗೂ ಶ್ರೀಮಂತದೇಶವನ್ನು ಕಾಡುತ್ತಿರುವುದು ಸಮಸ್ಯೆಯೇ ಈ ಡಗ್ಸ್ ಮಾಫಿಯಾ, ಇದಕ್ಕೆ ಯುವ ಜನರು ಬಲಿಯಾದಲ್ಲಿ ಕುಟುಂಬವೇ ನಾಶವಾಗುತ್ತದೆ. ಜೊತೆಗೆ ದೇಶವನ್ನು ನಾಶ ಮಾಡಲು ಯಾವುದೇ ರೀತಿಯ ಅಣುಬಾಂಬ್ ಬೇಕಿಲ್ಲ, ಈ ಡಗ್ಸ್ ಇದ್ದರೆ ಸಾಕು. ಆ ದೇಶವೇ ನಾಶವಾಗುತ್ತದೆ. ಇಂದಿನ ಯುವಕರು ತಂದೆ, ತಾಯಿ ಹಾಗೂ ಗುರುಗಳ ಋಣ ಎಂದಿಗೂ ಮರೆಯಬಾರದು. ಅಮಲು ಬರಿಸುವ ಮಾದಕ ವಸ್ತುಗಳ ಸೇವನೆಯಿಂದ ಮನುಷ್ಯ ಅನೇಕ ದೈಹಿಕ ಹಾಗೂ ಮಾನಸಿಕ ಕಾಯಿಲೆಗೆ ಒಳಗಾಗಿ ತನ್ನ ಜೀವನವನ್ನೇ ಕಳೆದುಕೊಳ್ಳುತ್ತಾನೆ, ಆರ್ಥಿಕವಾಗಿ ದಿವಾಳಿ ಕೂಡ ಆಗುತ್ತಾನೆ. ಕುಟುಂಬ ಮತ್ತು ಸಮಾಜದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಡಗ್ಸ್ ಮಾರಾಟ ಮಾಡುವವರು ನಿಮ್ಮನ್ನು ಸೆಳೆಯುತ್ತಾರೆ. ಕೀಡಿಗೇಡಿಗಳು ಡ್ರಗ್ಸ್ ಮೂಲಕ ಯುವಕರನ್ನು ದುರ್ಮಾಗಕ್ಕೆ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ನೀವು ಅದರ ಬಗ್ಗೆ ಸೂಚನೆ ಸಿಕ್ಕ ತಕ್ಷಣ 1933 ಅಥವಾ ಸಹಾಯವಾಣಿ ಸಂಖ್ಯೆ 112ಕ್ಕೆ ಕರೆಮಾಡಿ ಮಾಹಿತಿ ತಿಳಿಸಿಬೇಕು. ಮೊಬೈಲ್ ಎಷ್ಟು ಪ್ರಯೋಜನವಾಗಿದೆ ಅಷ್ಟೆ ದುಷ್ಪರಿಣಾಮವಿದೆ. ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾದವ್ ವಿಠ್ಠಲ್ ರಾವ್ ಮಾತನಾಡಿ, ಮಾದಕ ವಸ್ತುಗಳ ಸೇವನೆಯನ್ನು ಮಾಡುವ ಮೊದಲು ಕುಟುಂಬದ ಭವಿಷ್ಯದ ಕುರಿತು ಆಲೋಚಿಸಬೇಕು. ಮಾದಕ ವಸ್ತುಗಳ ಮಾರಾಟ ಕಾನೂನಿನನ್ವಯ ಅಪರಾಧವಾಗುತ್ತದೆ. ಯುವಕರು ಇಂತಹ ಮಾದಕ ವಸ್ತುಗಳಿಂದ ದೂರ ಇರುವ ಮೂಲಕ ಮಾನವ ಸಂಪನ್ಮೂಲವನ್ನು ಕಾಪಾಡಿಕೊಳ್ಳಬೇಕಾಗಿದೆ ಎಂದರು.

ವಿಶ್ವದಾದ್ಯಂತ ಈ ದುಶ್ಚಟಗಳಿಗೆ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. 1987 ರಂದು ವಿಶ್ವ ಸಂಸ್ಥೆಯ ಮಾದಕ ವಸ್ತುಗಳ ದುರುಪಯೋಗವನ್ನು ತಡೆಗಟ್ಟುವ ನಿರ್ದಿಷ್ಟ ಆಚರಣೆಯನ್ನು ಜಾರಿಗೆ ತರಲಾಯಿತು. ವಿದ್ಯಾರ್ಥಿಗಳ ಭವಿಷ್ಯ ನಮಗೆ ಬಹಳ ಮುಖ್ಯ ನಾವು 300ಕ್ಕೂ ಹೆಚ್ಚು ಶಾಲೆ, 1000 ಕ್ಕೂ ಹೆಚ್ಚು ಮಕ್ಕಳಿಗೆ ಇದರ ಕುರಿತು ಅರಿವು ಮೂಡಿಸಿದ್ದೇವೆ. ಜಿಲ್ಲೆಯಲ್ಲಿ ಇದರ ಕುರಿತು 3 ವರ್ಷದಲ್ಲಿ 409 ಪ್ರಕರಣಗಳನ್ನು ದಾಖಲು ಮಾಡಲಾಗಿದೆ. ಡ್ರಗ್ಸ್ ಕಾಯ್ದೆಯನ್ನು ಎಲ್ಲಾ ಶಾಲೆಗಳಲ್ಲಿ ಜಾರಿಗೆ ತಂದು ನಾಶಾ ಮುಕ್ತ ಅಭಿಯಾನ ಎಂಬ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುತ್ತದೆ. ಎ□□ಡಿಪಿಎಸ್ ಆಕ್ಟ್ ಪ್ರಕಾರ ಮಾರಾಟ ಮಾಡಿದರೆ ಪ್ರತಿಯೊಂದಕ್ಕೂ ಶಿಕ್ಷೆ ಇರುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಪ್ರಸ್ತಾವಿಕ ನುಡಿಗಳಾನ್ನಾಡಿದ ಬಳಿಕ ಪ್ರತಿಜ್ಞಾವಿಧಿ ಭೋಧಿಸಿದರು.

# ಯುವ ಪೀಳಿಗೆ ಮಾದಕ ದ್ರವ್ಯ ವ್ಯಸನಗಳಿಗೆ ಬಲಿಯಾಗದಿರಿ: ಐಜಿ ಡಾ.ರವಿಕಾಂತೇಗೌಡ

» ದಾವಣಗೆರೆ

ಯುವ ಸಮುದಾಯ ಮದ್ಯ, ಮಾದಕ ವಸ್ತುಗಳ ಸೇವನೆಗೆ ಪ್ರೇರೇಪಣೆಯಾಗದೇ ದುಶ್ಚಟಗಳಿಗೆ ಬಲಿಯಾಗದಿರಿ ಎಂದು ಪೂರ್ವವಲಯ ಐಜಿ ರವಿಕಾಂತೇಗೌಡ ತಿಳಿಸಿದರು.

ನಗರದ ದೊಡ್ಡಬಾತಿ ಸಮೀಪದ ತಪೋವನ ಆಯುರ್ವೇದಿಕ್ ಮತ್ತು ಮೆಡಿಕಲ್ ಕಾಲೇಜ್ ಆವರಣದಲ್ಲಿ ಗುರುವಾರ ತಪೋವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ತಪೋವನ ಆಯುರ್ವೇದ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ, ತಪೋವನ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್ ಹಾಗೂ ಹರಿಹರದ ಸ್ಪಂದನ ಮದ್ಯವ್ಯಸನಿಗಳ ಪುನರ್ವಸತಿ ಕೇಂದ್ರದ ವತಿಯಿಂದ ಅಂತಾರಾಷ್ಟ್ರೀಯ ಮಾದಕ ವಸ್ತುವಿನ ವಿರೋಧಿ ದಿನಾಚರಣೆ ಅಂಗವಾಗಿ ಮಾದಕ ವಸ್ತುವಿನ ವ್ಯಸನವನ್ನು ತಡೆಗಟ್ಟುವ ಕುರಿತು ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.




ಪ್ರಪಂಚದಲ್ಲಿ ಪ್ರಮುಖವಾಗಿ ಭಯೋತ್ಪಾದನೆ ಮತ್ತು ಮಾದಕ ದ್ರವ್ಯ ವ್ಯಸನ ಈ ಎರಡು ಪ್ರಮುಖ ಸಮಸ್ಯೆಗಳನ್ನು ಕಾಣಬಹುದು. ಭಯೋತ್ಪಾದನೆ ಎಂಬುದು ಒಂದು ಪಿಡುಗು. ಇದು ಯಾವುದೋ ಒಂದು ಸ್ಥಳ, ಸಂಸ್ಥೆ, ಪ್ರದೇಶವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗುತ್ತದೆ. ಇದರಿಂದ ಮಾನವ ಸಂಪನ್ಮೂಲ ಮೂಲಭೂತ ಸೌಕರ್ಯಗಳು ಸಂಪೂರ್ಣವಾಗಿ ನಾಶವಾಗುತ್ತದೆ. ಆದರೆ ಮಾದಕ ದ್ರವ್ಯ ವ್ಯಸನ ಇಡೀ ಪ್ರಪಂಚವನ್ನೇ ಕಾಡುತ್ತಿರುವ ಮತ್ತೊಂದು ದೊಡ್ಡ ಸಾಮಾಜಿಕ ಪಿಡುಗಾಗಿದೆ. ಈ ವ್ಯಸನಗಳಿಗೆ ಬಲಿಯಾದ ವ್ಯಕ್ತಿ ಪ್ರತಿಯೊಂದು ಕ್ಷಣವೂ ಜೀವನ್ಮರಣ ಹೋರಾಟ ನಡೆಸುತ್ತಾನೆ.

ಭಯೋತ್ಪಾದಕರು ನಡೆಸಿದ ಕೃತ್ಯಕ್ಕೆ ಆ ಭಯೋತ್ಪಾದಕ ಬಲಿಯಾಗುತ್ತಾನೆ. ಆದರೆ ಯಾವುದೇ ಒಂದು ದೇಶವನ್ನು ನಾಶ ಮಾಡಲು ಯುದ್ಧ ಮಾಡುವ ಅವಶ್ಯಕತೆ ಇಲ್ಲಾ, ಯುವ ಸಮುದಾಯವನ್ನು ಗುರಿಯಾಗಿಸಿಕೊಂಡು ಯುವಕರಿಗೆ ಮದ್ಯ, ಮಾದಕ ದ್ರವ್ಯಗಳು ಲಭ್ಯವಾಗುವಂತೆ ಮಾಡುವ ಮೂಲಕ ಕೆಲವು ದೇಶಗಳು ದೇಶವನ್ನು ನಾಶಪಡಿಸುತ್ತಿವೆ.

ಭವಿಷ್ಯದಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುವವರಿದ್ದೀರಿ, ಸಮಾಜದ ದೈಹಿಕ, ಮಾನಸಿಕ ಆರೋಗ್ಯ ಕಾಪಾಡುವ ಶಕ್ತಿ ನಿಮ್ಮಲ್ಲಿದೆ. ಮನಸ್ಸಿನ ಆರೋಗ್ಯ ಕಾಪಾಡಿಕೊಂಡಲ್ಲಿ ದೈಹಿಕ ಆರೋಗ್ಯ ಉತ್ತಮವಾಗಿರಲಿದೆ. ಈ ಹಿನ್ನೆಲೆಯಲ್ಲಿ ದೇಶವು ವ್ಯಸನಮುಕ್ತ ರಾಷ್ಟ್ರವಾಗಲಿ, ಹಾಗಾಗಿ ಯಾವ ದೇಶ ವ್ಯಸನಮುಕ್ತ ರಾಷ್ಟ್ರವಾಗುವುದೋ ಆ ದೇಶವೂ ಪ್ರಗತಿಶೀಲ ರಾಷ್ಟ್ರವಾಗುವುದು. ನಮ್ಮ ದೇಶವು ಮತ್ತಷ್ಟು ಬಲಿಷ್ಠವಾಗಿ ಬೆಳೆಯಬೇಕಾದರೆ ಇಂತಹ ದುಶ್ಚಟ, ವ್ಯಸನಗಳಿಗೆ ಬಲಿಯಾಗದೇ ಇದರ ವಿರುದ್ಧ ಹೋರಾಡೋಣ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಮಾತನಾಡಿ, ಮದ್ಯ, ಮಾದಕ ವ್ಯಸನದಿಂದ ವೈಯಕ್ತಿಕವಾಗಿ ಮತ್ತು ಸಾಮಾಜಿಕವಾಗಿ ಗಾಢವಾದ ಪರಿಣಾಮ ಬೀರುತ್ತದೆ. ಇದು ಕೇವಲ ಒಬ್ಬ ವ್ಯಕ್ತಿಯ ಮೇಲೆ ದುಷ್ಪರಿಣಾಮ ಬೀರದೆ, ಇಡೀ ಕುಟುಂಬವೇ ಇದರ ಪರಿಣಾಮವನ್ನು ಎದುರಿಸಬೇಕಾಗುತ್ತದೆ. ಇಂತಹ ಕಾರ್ಯಕ್ರಮ ಈ ದಿನಕ್ಕೆ ಸೀಮಿತವಾಗದೆ ನಿರಂತರವಾಗಿ ಕರ್ತವ್ಯದಲ್ಲಿ ತೊಡಗಿಸಿಕೊಂಡು ನಶಾ ಮುಕ್ತ ಸಮಾಜ ನಿರ್ಮಾಣಕ್ಕೆ ತಾವೆಲ್ಲರೂ ಪ್ರಾಮಾಣಿಕವಾಗಿ ಶ್ರಮಿಸೋಣ ಎಂದು ತಿಳಿಸಿ ಮದ್ಯ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಕುರಿತು ಪ್ರತಿಜ್ಞಾವಿಧಿ ಭೋಧಿಸಿದರು. ತಪೋವನ ಸಮೂಹ ಸಂಸ್ಥೆಯ ನಿರ್ದೇಶಕ ಡಾ.ಶಶಿಕುಮಾರ್ ವಿ ಮೆಹರ್ವಾಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಸಭೆಯಲ್ಲಿ ವಿಶೇಷಚೇತನ ಹಾಗೂ ಹಿರಿಯ ನಾಗರಿಕ ಸಬಲೀಕರಣ ಅಧಿಕಾರಿ ಡಾ. ಕೆ ಕೆ.ಪ್ರಕಾಶ್, ನಗರ ಸಿಇಎನ್ ಠಾಣಾ ಇನ್ಸ್‌ಪೆಕ್ಟರ್ ಹೆಚ್.ಸಿ.ವಸಂತ್, ತಪೋವನ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಪ್ರಾಂಶುಪಾಲರಾದ ಡಾ. ಕೆ. ಆರ್. ಅಶ್ವಿನಿ, ತಪೋವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಪ್ರಾಂಶುಪಾಲೆ ಡಾ. ಸುಮನಾ ಭಟ್, ತಪೋವನ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್ ಶೈಲಜಾ ಬಿ. ಆರ್. ಸೇರಿದಂತೆ ಸಂಸ್ಥೆಯ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

ಫಾಸ್ಟ್ ನ್ಯೂಸ್

## ನಾನು ಸಹ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದೇನೆ: ಶಾಸಕ ಟಿ.ರಘುಮೂರ್ತಿ



» ಚಿತ್ರದುರ್ಗ

ನಾನು ಸಹ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದೇನೆ, ಸತತ ಮೂರು ಸಲ ಜನ ಗೆಲಿಸಿದ್ದು ಹೈಕಮಾಂಡ್ ಗಮನಿಸಿದೆ ನಮ್ಮ ಎಸ್ಸಿ ಸಮುದಾಯಕ್ಕೆ ಪ್ರಾತಿನಿಧ್ಯ ನೀಡುವ ಭರವಸೆಯಿದೆ ಎಂದು ಶಾಸಕರು, ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಟಿ ರಘುಮೂರ್ತಿ ತಿಳಿಸಿದರು. ಚಿತ್ರದುರ್ಗದಲ್ಲಿ ಮಾಧ್ಯಮವರೊಂದಿಗೆ ಮಾತನಾಡಿದ ಚಳ್ಳಕೆರೆ ಕಾಂಗ್ರೆಸ್ ಶಾಸಕ ಟಿ ರಘುಮೂರ್ತಿ, ಸಿಎಂ ದೆಹಲಿ ಪ್ರವಾಸ, ಸಚಿವ ಸಂಪುಟ ವಿಸ್ತರಣೆ ಬಗ್ಗೆ ಮಾಹಿತಿ ಇಲ್ಲ ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರ ಮಾಡುವ ಭರವಸೆ ಇದೆ ನಮ್ಮ ಕ್ಷೇತ್ರದಲ್ಲಿ ವಸತಿ ಯೋಜನೆಯಲ್ಲಿ ಭ್ರಷ್ಟಾಚಾರ ಆಗಿಲ್ಲ ಗ್ಯಾರಂಟಿ ಯೋಜನೆ ಜತೆಗೆ ಇತರೆ ಕೆಲಸಗಳೂ ನಡೆಯುತ್ತಿವೆ ಸ್ವಲ್ಪ ಕಡಿಮೆ ಆಗಿರಬಹುದು, ಆದರೆ ಅಭಿವೃದ್ಧಿ ಆಗುತ್ತಿದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಭಿವೃದ್ಧಿ ಕೆಲಸ ಆಗಿಲ್ಲ ಎಂದು ರಘುಮೂರ್ತಿ ತಿಳಿಸಿದರು.

## ಲಿಂ.ಡಾ. ಪುಟ್ಟರಾಜ ಕವಿ ಗವಾಯಿಗಳ 15ನೇ ಪುಣ್ಯ ಸ್ಮರಣೋತ್ಸವ



» ಚಿತ್ರದುರ್ಗ

ಶ್ರೀ ಗಾನಯೋಗಿ ಸಂಗೀತ ಬಳಗದವತಿಯಿಂದ ಲಿಂ. ಪಂಚಾಕ್ಷರ ಗವಾಯಿಗಳ 81ನೇ ಹಾಗೂ ಲಿಂ. ಡಾ. ಪುಟ್ಟರಾಜ ಕವಿ ಗವಾಯಿಗಳ 15ನೇ ಪುಣ್ಯ ಸ್ಮರಣೋತ್ಸವ ಸಮಾರಂಭವೂ ಜೂ. 29 ರ ಭಾನುವಾರ ಬೆಳ್ಳಿಗೆ 10.30ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಶ್ರೀಮತಿ ಶಾರದಮ್ಮ ರುದ್ರಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಗಾನಯೋಗಿ ಸಂಗೀತ ಬಳಗದ ಕಾರ್ಯಾಧ್ಯಕ್ಷರಾದ ನಂದೀಶ್ ಜಿ.ಟಿ.ರವರು ತಿಳಿಸಿದ್ದಾರೆ. ಕಾರ್ಯಕ್ರಮದ ಸಾನಿಧ್ಯವನ್ನು ದಾವಣಗೆರೆ ವಿರಕ್ತಮಠದ ಡಾ.ಬಸವಪ್ರಭು ಶ್ರೀಗಳು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಶ್ರೀ ಗಾನಯೋಗಿ ಸಂಗೀತ ಬಳಗದ ಎಂ.ತೋಟಪ್ಪ ಉತ್ತಂಗಿ ವಹಿಸಲಿದ್ದಾರೆ. ನಿವೃತ್ತ ಉಪನ್ಯಾಸಕರಾದ ಶ್ರೀಮತಿ ಸಿ.ಬಿ.ಶೈಲಾ ವಿಜಯಕುಮಾರ್ ಉಭಯ ಶ್ರೀಗಳ ಬಗ್ಗೆ ಉಪನ್ಯಾಸವನ್ನು ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಶ್ರೀಮತಿ ಶಾರದಮ್ಮ ರುದ್ರಪ್ಪ, ಶ್ರೀಮತಿ ಉಮಾ ರಮೇಶ್, ಶ್ರೀಮತಿ ಪ್ರೇಮ ಬಾಲಚಂದ್ರಪ್ಪ, ಶ್ರೀಮತಿ ನೀಲಮ್ಮ ಬಸಯ್ಯ ಹಾಗೂ ಬ್ರಹ್ಮಚಾರಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಸಮಾಜದಲ್ಲಿ ವಿವಿಧ ಕ್ಷೇತ್ರದಲ್ಲಿ ಗಣನೀಯವಾಗಿ ಸೇವೆ, ಸಾಧನೆಯನ್ನು ಮಾಡಿದ ಹಿರಿಯ ಪತ್ರಕರ್ತರು, ಬರಹಗರರಾದ ಜಿ.ಎಸ್. ಉಜ್ಜನಪ್ಪ, ಜಾನಪದ ಗಾಯಕಿ ಶ್ರೀಮತಿ ಸುಶೀಲಮ್ಮ, ಪರಿಸರ ಪ್ರೇಮಿ ಸಿದ್ದರಾಜು ಜೋಗಿ, ಸಂಗೀತಗರಾರದ ರಾಮಲಿಂಗ ಜಲ್ಲಾಪುರ ಹಾಗೂ ರಂಗಕರ್ಮಿ ಪ್ರಕಾಶ್ ಬಾದರದಿನ್ನಿಯವರನ್ನು ಸನ್ಮಾನಿಸಲಾಗುವುದು ಇದರೊಂದಿಗೆ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಶ್ರೀ ಗಾನಯೋಗಿ ಸಂಗೀತ ಬಳಗದವತಿಯಿಂದ ಗೀತಾ ಗಾಯನ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.

## ತರಬೇತಿ ಆಯ್ಕೆಗೆ ಅರ್ಜಿ

» ಶಿವಮೊಗ್ಗ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಬೆಂಗಳೂರಿನ ಹಜ್ ಭವನದಲ್ಲಿ ನಡೆಸುವ ಯುಪಿಎಸ್‌ಸಿ/ಐಎಎಸ್ ಪರೀಕ್ಷಾ ಪೂರ್ವ ತರಬೇತಿಗೆ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂ.30 ಕೊನೆಯ ದಿನಾಂಕವಾಗಿದೆ. ಅರ್ಜಿಯನ್ನು https:// https://dom.karnataka.gov.in ವೆಬ್‌ಸೈಟ್ ಅಥವಾ ಅಲ್ಪಸಂಖ್ಯಾತರ ನಿರ್ದೇಶನಾಲಯ, ನಂ 16 ಸಿ, ಮಿಲ್ ಟ್ಯಾಂಕ್ ಬೆಡ್ ರಸ್ತೆ, ವಸಂತ ನಗರ ಬೆಂಗಳೂರು 560052 ಇಲ್ಲಿಗೆ ಸಲ್ಲಿಸಬಹುದು. 21 ರಿಂದ 35 ವರ್ಷ ವಯಸ್ಸಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು ಯುಜಿಸಿ ಇಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದಿರಬೇಕು. ಹಾಗೂ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಅಲ್ಪಸಂಖ್ಯಾತರ ಜಿಲ್ಲಾ ಮಾಹಿತಿ ಕೇಂದ್ರದ ದೂ.ಸಂ-7676888388 ಸಂಪರ್ಕಿಸಬಹುದು.

---

ಮಾದಕವಸ್ತುಗಳ ಸೇವನೆವಿರುದ್ಧ ಜಾಗೃತಿ ಜಾಥ

# ಸಂತೃಪ್ತಿಯ ಜೀವನ ನಡೆಸಲು ಮಾದಕ ವಸ್ತು ಸೇವನೆ ತ್ಯಜಿಸಿ: ಡಿವೈಎಸ್ಪಿ ಟಿ.ಬಿ.ರಾಜಣ್ಣ

» ಚಳ್ಳಕೆರೆ

ಮಾದಕ ವಸ್ತುಗಳ ಸೇವನೆಯಿಂದ ಬದುಕು ಅಪಾಯಸ್ಥಿತಿಯನ್ನು ತಲುಪುತ್ತದೆ. ಮಾದಕ ವಸ್ತುಗಳು ವೈಯಕ್ತಿಯವಷ್ಟೇಯಲ್ಲದೆ, ಸಂಸಾರವನ್ನೇ ನಾಶಪಡಿಸುವ ಅವಕಾಶವಿದೆ. ಆದ್ದರಿಂದಮಾದಕವಸ್ತುಗಳನ್ನುತ್ಯಜಿಸಿದರೆಮಾತ್ರ ಸಂತೃಪ್ತಿಯ ಜೀವನ ನಡೆಸುವುದಲ್ಲದೆ ಎಲ್ಲರಿಗೂ ಮಾದರಿಯಾಗಬಹುದು ಎಂದು ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣತಿಳಿಸಿದರು.

ಅವರು,ಗುರುವಾರವಾಲ್ಮೀಕಿವೃತ್ತದಲ್ಲಿಸರ್ಕಾರಿ ಪದವಿಪೂರ್ವ ಕಾಲೇಜು, ಬಿ.ಎಂ.ಸರ್ಕಾರಿ ಪ್ರೌಢಶಾಲೆ, ಗಿರಿಯಮ್ಮಪದವಿಪೂರ್ವ ಕಾಲೇಜು ಹಾಗೂಪೊಲೀಸ್ ಇಲಾಖೆಸಂಯುಕ್ತಾಶ್ರಮದಲ್ಲಿ ಹಮ್ಮಿಕೊಂಡಿದ್ದ ಮಾದಕ ವಸ್ತುಗಳ ನಿಷೇದ ಕುರಿತು ಅರಿವು ಜಾಗೃತಿಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ಇಂದಿನ ಜಾಥದಲ್ಲಿ ನಿರೀಕ್ಷೆಗೂ ಮೀರಿ ಹೆಚ್ಚಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದಾರೆ. ಜಾಥದ ಉದ್ದೇಶವನ್ನು ಎಲ್ಲರಿಗೂ ತಿಳಿಸುವ ಜವಾಬ್ದಾರಿ ಜಾಥದಲ್ಲಿ ಪಾಲ್ಗೊಂಡವರ ಮೇಲಿದೆ. ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಮಗಳ ಬಗ್ಗೆ ಜನರಿಗೂ ಸಹ ಅರಿವು ಮೂಡಿಸಬೇಕಿದೆ. ಮಾದಕ ವಸ್ತುಗಳ ಸೇವನೆ ಬದುಕನ್ನು ಅತಂತ್ರಗೊಳಿಸುವುದಾಗಿದೆ ಎಂದು ತಿಳಿಸಿದರು.



ಉಪನ್ಯಾಸಕಿ, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಆರೋಗ್ಯ ಮತ್ತು ಪೊಲೀಸ್ ಇಲಾಖೆ ಪ್ರತಿವರ್ಷವೂ ಇಂತಹ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಲ್ಲಿ ವಿಶೇಷ ಅಂದೋಲನ ನಡೆಸುತ್ತಾ ಬಂದಿದೆ. ಯುವಪೀಳಿಗೆ ಮಾದಕ ವಸ್ತುಗಳ ಸೇವನೆಗೆ ಬಲಿಯಾಗಿ ಸಮಾಜದಲ್ಲಿ ಕೆಟ್ಟಹೆಸರು ಪಡೆಯುತ್ತಿದೆ. ಮಾದಕ ವಸ್ತುಗಳ ಸೇವಿಸುವವರನ್ನು ಸಮಾಜ ಸದಾಕಾಲ ದೂರವಿಡುತ್ತದೆ. ಎಲ್ಲರಲ್ಲೂ ಪ್ರೀತಿ, ವಿಶ್ವಾಸ, ಗೌರವ ಬೆಳೆಸಿಬದುಕಲು ಮಾದಕವಸ್ತುಗಳ ಸೇವೆ ಸಂಪೂರ್ಣವಾಗಿ ತ್ಯಜಿಸಬೇಕೆಂದರು.

ಈ ಸಂದರ್ಭದಲ್ಲಿ ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್, ಪಿಎಸ್‌ಐಗಳಾದ ಜೆ.ಶಿವರಾಜ್, ಈರೇಶ್, ಉಪನ್ಯಾಸಕ ಅಬ್ದುಲ್‌ವಾಯಿದ್, ಮುಖ್ಯಪೇದೆ ಗಂಗಮ್ಮ, ಪೇದೆಗಳಾದ ಸಂತೋಷ್, ಪ್ರಭುರಾಜ್, ತಿಲಕ್‌ರಾಜ್, ಶಂಕರ ಮುಂತಾದವರು ಪಾಲ್ಗೊಂಡಿದ್ದರು.

## ಸರ್ಕಾರಿ ಬಾಲಕಿಯರ ಕಾಲೇಜಿನಲ್ಲಿ ಶಾಲಾ ಸಂಸತ್ ಚುನಾವಣೆ



» ಚಿತ್ರದುರ್ಗ

ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿನಿಯರಿಗೆ ಗುರುವಾರ ಶಾಲಾ ಸಂಸತ್ ಚುನಾವಣೆ ನಡೆಸಲಾಯಿತು. ಎಂಟನೆ ತರಗತಿಯಿಂದ ಏಳು ವಿದ್ಯಾರ್ಥಿನಿಯರು, ಒಂಬತ್ತನೆ ತರಗರಿಯಿಂದ ಐದು ವಿದ್ಯಾರ್ಥಿನಿಯರು ಹಾಗೂ ಹತ್ತನೆ ತರಗತಿಯಿಂದ ಆರು ವಿದ್ಯಾರ್ಥಿನಿಯರು ಚುನಾವಣೆಗೆ ಸ್ಪರ್ಧಿಸಿದ್ದರು. ಬೆಳಿಗ್ಗೆ ಹನ್ನೊಂದರಿಂದ ಮಧ್ಯಾಹ್ನ 1-30 ರವರೆಗೆ ನಡೆದ ಚುನಾವಣೆಯಲ್ಲಿ 425 ವಿದ್ಯಾರ್ಥಿನಿಯರು ಸರತಿ ಸಾಲಿನಲ್ಲಿ ನಿಂತು ಮತ ಚಲಾಯಿಸಿದರು. ಪ್ರಭು ಪ್ರಸಾದ್ ಚುನಾವಣಾಧಿಕಾರಿಯಾಗಿದ್ದರು. ಉಪ ಪ್ರಾಚಾರ್ಯರಾದ ಕರಿಯಪ್ಪ ಚುನಾವಣಾ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿದರು. ನೋಡಲ್ ಅಧಿಕಾರಿಯಾಗಿ ಎನ್.ಕೃಷ್ಣಮೂರ್ತಿ ಚುನಾವಣೆಯನ್ನು ನಡೆಸಿಕೊಟ್ಟರು. ಆರ್.ಎಂ.ಮಹಮದ್‌ಖಾನ್, ವಿಜಯಕುಮಾರ್, ಫಹಿಮುನ್ನಿಸಾ ಇವರುಗಳು ವೀಕ್ಷಕರಾಗಿ ಚುನಾವಣೆಯನ್ನು ಸುಸೂತ್ರವಾಗಿ ನಡೆಸಿದರು.

## ರೈತ ಸಂಘಟನೆ ಪ್ರಬಲವಾದರೆ ಮಾತ್ರ ಸರ್ಕಾರದಿಂದ ಸೌಲಭ್ಯಪಡೆಯಲು ಸಾಧ್ಯ: ವೀರಣ್ಣ



**ಚಳ್ಳಕೆರೆ:** ಕಳೆದ ಎರಡು ವರ್ಷಗಳ ಅವಧಿಯಲ್ಲಿ ಪ್ರಸ್ತುತ ರಾಜ್ಯದಲ್ಲಿ ಆಡಳಿತನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ರೈತ ಸಮುದಾಯಕ್ಕೆ ಯಾವುದೇ ಸೌಲಭ್ಯ ನೀಡದೆ ವಂಚಿಸುತ್ತಿದೆ. ರೈತರ ಬಗ್ಗೆ ಸರ್ಕಾರಕ್ಕೆ ಯಾವುದೇ ಕಾಳಜಿಯಿಲ್ಲ, ಆದ್ದರಿಂದ ರೈತರು ಸಂಘಟಿತರಾಗಿ ತಮ್ಮ ಹಕ್ಕನ್ನು ಪಡೆಯಲು ಮುಂದಾಗಬೇಕೆಂದು ಕರ್ನಾಟಕ ರಾಜ್ಯರೈತಸಂಘ ಹಾಗೂ ಹಸಿರುಸೇನೆ ರಾಜ್ಯಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಆರೋಪಿಸಿದರು. ಅವರು, ಗುರುವಾರ ತಾಲ್ಲೂಕಿನ ದುಗ್ಗಾವರ ಗ್ರಾಮದಲ್ಲಿ ರೈತ ಸಂಘದ ನೂತನ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗಗಳಲ್ಲಿ ರೈತ ಸಂಘ ಆಳಾವಾಗಿ ಬೇರೂರಿದೆ. ಪ್ರತಿವರ್ಷವೂ ರೈತರು ಬೇಡಿಕೆಗಳ ಈಡೇರಿಕೆಗಾಗಿ ಹಲವಾರು ಪ್ರತಿಭಟನೆಯನ್ನು ಕೈಗೊಂಡಿದ್ದಾರೆ. ಸರ್ಕಾರ ಮಾತ್ರ ವಿಫಲವಾಗಿದೆ ಎಂದರು. ಗ್ರಾಮ ಘಟಕದ ಅಧ್ಯಕ್ಷರಾಗಿ ರಾಜಪ್ಪ, ಕಾರ್ಯದರ್ಶಿ ಪ್ರಸನ್ನಕುಮಾರ್, ಖಜಾಂಚಿ ಕೆ.ನಿಂಗಣ್ಣ, ಸಹಕಾರ್ಯದರ್ಶಿ ಸೋಮುಲನಿಂಗಪ್ಪ ಆಯ್ಕೆಗೊಂಡರು.

---

ಪ್ರಮುಖ ಸುದ್ದಿ

ಗ್ಯಾರಂಟಿಯೋಜನೆಗೆ ಫಲಾನುಭವಿಗಳು ತ್ರಿಶಂಕುಸ್ಥಿತಿ –ವಸತಿ ಯೋಜನೆಯಲ್ಲಿ ಬಡವರಿಗೆ ಅನ್ಯಾಯ: ಕೆ.ಟಿ.ಕುಮಾರಸ್ವಾಮಿ

# ಎರಡೂವರೆ ವರ್ಷಗಳ ಆಡಳಿತದಲ್ಲಿ ರಾಜ್ಯದ ಅಭಿವೃದ್ಧಿಕಡೆಗಣನೆ

» ಚಳ್ಳಕೆರೆ

ರಾಜ್ಯದಲ್ಲಿ ಕಳೆದ ಎರಡೂವರೆ ವರ್ಷಗಳಿಂದ ಆಡಳಿತನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಕಾಂಗ್ರೆಸ್‌ಸರ್ಕಾರಜನತೆಗೆನೀಡಿದ ಗ್ಯಾರಂಟಿ ಭರವಸೆ ಮೂಲಕ ಅಧಿಕಾರ ಪಡೆಯಿತು. ಆದರೆ, ರಾಜ್ಯದ ಯಾವುದೇ ಭಾಗದಲ್ಲಿ ಅಭಿವೃದ್ಧಿಕೆಲಸಗಳು ಆಗಿಲ್ಲ, ಎಲ್ಲೆಡೆ ಭ್ರಷ್ಟಾಚಾರ ತಾಂಡವಾಡುತ್ತಿದೆ, ರಾಜ್ಯದ ಪ್ರತಿಯೊಂದು ಇಲಾಖೆಯಲ್ಲೂ ಲಂಚನೀಡದಿದ್ದರೆ ಕೆಲಸವಾಗದು. ವಿಶೇಷವಾಗಿ ಕಡುಬಡವರು ನಿರ್ಮಿಸಲು ಬಯಸುವ ಮನೆಗಳಿಗೂ ಈ ಸರ್ಕಾರ ಲಂಚಪಡೆಯುತ್ತಿದೆ ಎಂದರೆ ಇಂತಹ ನಾಚಿಕೆಗೇಡಿನ ಸರ್ಕಾರ ಅಧಿಕಾರದಲ್ಲಿರಲು ಯೋಗ್ಯವಲ್ಲವೆಂದು ಭಾರತೀಯ ಜನತಾಪಕ್ಷದ ಜಿಲ್ಲಾಘಟಕದ ಅಧ್ಯಕ್ಷ ಕೆ.ಟಿ.ಕುಮಾರಸ್ವಾಮಿ ಆರೋಪಿಸಿದರು.




ಅವರು, ಗುರುವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಬಿಜೆಪಿಮಂಡಲದ ವತಿಯಿಂದ ಹಮ್ಮಿಕೊಂಡಿದ್ದ ವಸತಿಸಚಿವ ಜಮೀರ್‌ಆಹಮ್ಮದ್ ರಾಜೀನಾಮೆ ನೀಡುವಂತೆ ಒತ್ತಾಯಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ತಹಶೀಲ್ದಾರ್‌ಗೆ ಮನವಿ ಅರ್ಪಿಸಿ ಮಾತನಾಡಿದರು. ರಾಜ್ಯದ ಸರ್ವತೋಮುಖ ಅಭಿವೃದ್ಧಿಯನ್ನು ಆಡಳಿತರೂಢ ಕಾಂಗ್ರೆಸ್ ಪಕ್ಷ ಸಂಪೂರ್ಣವಾಗಿ ಮರೆತಿದೆ. ರಾಜ್ಯದ ಯಾವುದೇ ಭಾಗದಲ್ಲೂ ಅಭಿವೃದ್ಧಿ ಯಾಗಿಲ್ಲ,ಪ್ರತಿತಿಂಗಳುಗೃಹಲಕ್ಷ್ಮಿಯೋಜನೆ ಫಲಾನುಭವಿಗಳಿಗೆ ಹಣದೊರಕುತ್ತಿಲ್ಲ, ಮೂರ್‍ನಾಲ್ಕು ತಿಂಗಳಿಗೊಮ್ಮೆ ಹಣ ಹಾಕುತ್ತಿದ್ದಾರೆ. ಸರ್ಕಾರದಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಯಷ್ಟೇಯಲ್ಲ, ಸರ್ಕಾರಿ ನೌಕರರಿಗೆ ವೇತನ ನೀಡಲು ಹಣವಿಲ್ಲವೆಂಬ ಮಾಹಿತಿಇದೆ. ವಸತಿ ಸಚಿವಾಲಯದಲ್ಲಿ ಬಡವರು ಸೂರುಪಡೆಯಲು ಲಂಚನೀಡಬೇಕಾದ ಸ್ಥಿತಿಯ ಬಗ್ಗೆ ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕ ಬಿ.ಆರ್.ಪಾಟೀಲ್ ಆರೋಪಿಸಿದ್ದಾರೆ. ರಾಜುಕಾಂಗೆ, ಎನ್.ವೈ. ಗೋಪಾಲಕೃಷ್ಣರಂತಹ ಹಿರಿಯ ಶಾಸಕರು ಸರ್ಕಾರದ ಆಡಳಿತಕ್ಕೆ ಬೇಸತ್ತಿದ್ದಾರೆ. ಹಣವಿದ್ದವರಿಗೆ ಮಾತ್ರ ವಸತಿ ಸೌಕರ್ಯ ಮನೆಗಳೆಲ್ಲಾ ಭ್ರಷ್ಟರಪಾಲು ಸರ್ಕಾರವನ್ನು ನಂಬಿದ ಬಡವರು ಬೀದಿಪಾಲು ಎನ್ನುವಂತಾಗಿದೆ ಎಂದರು.

ಜಿಲ್ಲಾ ಬಿಜೆಪಿ ರೈತಮೋರ್ಚಾ ಅಧ್ಯಕ್ಷ ವೆಂಕಟೇಶ್‌ಯಾದವ್ ಮಾತನಾಡಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಾಜಿಜಿಲ್ಲಾ ಪ್ರಧಾನ ಕಾರ್ಯದರ್ಶಿ ಜೆ.ಪಿ.ಜಯಪಾಲಯ್ಯ, ದಿನೇಶ್‌ರೆಡ್ಡಿ, ಈಶ್ವರನಾಯಕ, ಚಿದಾನಂದ, ಜಿ.ಕೆ. ತಿಪ್ಪೇಶ್,ದೊರೆನಾಗರಾಜು, ಪಾಲಯ್ಯ, ಶಶಿ, ಟಿ.ತಿಮ್ಮಪ್ಪ ಟಿ.ಮಂಜುನಾಥ, ಮಂಡಲಾಧ್ಯಕ್ಷ ಬಿ.ಎಂ.ಸುರೇಶ್, ಉಪಾಧ್ಯಕ್ಷ ಮಂಜುನಾಥರೆಡ್ಡಿ, ಸುರೇಶ್, ಚಿದಾನಂದಪ್ಪ, ಶ್ರೀದೇವಿ, ಸಿದ್ದೇಶ್ವರಪ್ಪ, ಕಾಂತರಾಜ್, ರುದ್ರಮುನಿ, ಪ್ರಧಾನ ಕಾರ್ಯದರ್ಶಿ ಆರ್.ಸುರೇಶ್, ಓಬಳೇಶ್, ಕಾರ್ಯದರ್ಶಿ ಚನ್ನವೀರಪ್ಪ, ಅಂಬಿಕಾ, ನವೀನ್, ಬಿ.ಅಶೋಕ್, ದಿನೇಶ್, ಖಜಾಂಚಿ ಬಿ.ಎಂ.ಶ್ರೀನಿವಾಸ್, ವಿವಿಧ ಘಟಕಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T